ಕರ್ನಾಟಕ ವಿಧಾನ ಸಭೆ, ...
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ವಿಭಾಗ / ವಿಷಯ : DEPARTMENT / SUBJECT ____ ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER ವಿಜಯವಾಣಿ     ದಿನಾಂಕ : DATE 16/6/2020

# ವಿಧಾನ ಪರಿಷತ್‌ಗೆ ಬಿಜೆಪಿ ಆಯ್ಕೆ ಫೈನಲ್?

## ಶಂಕರ್, ಎಂಟಿಬಿ, ವಲ್ಯಾಪುರೆ, ಸುರಾನ ಸೇರಿ 10 ಸಂಭಾವ್ಯರು | ಕೇಂದ್ರ ಸಮಿತಿಗೆ ರವಾನೆ

ಬೆಂಗಳೂರು: ತೀವ್ರ ಕುತೂಹಲ ಮೂಡಿಸಿರುವ ವಿಧಾನ ಪರಿಷತ್ ಚುನಾವಣೆಗೆ ಬಿಜೆಪಿಯಿಂದ ಮಾಜಿ ಸಚಿವರಾದ ಆರ್. ಶಂಕರ್, ಎಂ.ಟಿ.ಬಿ. ನಾಗರಾಜ್, ಮಾಜಿ ಶಾಸಕರಾದ ಸುನಿಲ್ ವಲ್ಯಾಪುರೆ, ನಿರ್ಮಲ್ ಕುಮಾರ್ ಸುರಾನ ಸೇರಿ 10 ಸಂಭಾವ್ಯರ ಪಟ್ಟಿಯನ್ನು ಅಂತಿಮ ಮಾಡಲಾಗಿದೆ.

ಈ ಬಗ್ಗೆ ಕೇಂದ್ರ ಚುನಾವಣಾ ಸಮಿತಿಗೆ ಸಲ್ಲಿಸಲು ಸೋಮವಾರ ನಡೆದ ರಾಜ್ಯ ಬಿಜೆಪಿ ಕೋರ್ ಕಮಿಟಿ ಸಭೆಯಲ್ಲಿ ನಿರ್ಧರಿಸಲಾಗಿದೆ ಎಂದು ಮೂಲಗಳು ಹೇಳಿವೆ.

ಮೇಲ್ಕಂಡ ನಾಲ್ಕು ಸಂಭಾವ್ಯರ ಜತೆಗೆ ಮಾಜಿ ಸಚಿವ ಸಿ.ಪಿ. ಯೋಗೇಶ್ವರ್, ಮಾಜಿ ಶಾಸಕರಾದ ಮುನಿರತ್ನ, ಭಾರತಿ ಶೆಟ್ಟಿ, ರಾಜ್ಯ ಬಿಜೆಪಿ ಪ್ರಧಾನ ಕಾರ್ಯದರ್ಶಿ ಮಹೇಶ್ ಟೆಂಗಿನಕಾಯಿ, ಪ್ರತಾಪ್ ಸಿಂಹ ನಾಯಕ್, ಗೋಪಿನಾಥ ರೆಡ್ಡಿ ಅವರ ಹೆಸರನ್ನೂ ಉಲ್ಲೇಖಿಸಿರುವ ಸಾಧ್ಯತೆ ಇದೆ.

ವಿಧಾನ ಪರಿಷತ್‌ನ ಏಳು ಸ್ಥಾನಕ್ಕೆ ನಡೆಯುವ ಚುನಾವಣೆಯಲ್ಲಿ ಬಿಜೆಪಿ ನಾಲ್ಕು ಸ್ಥಾನ ಗೆಲ್ಲಲು ಅವಕಾಶವಿದೆ. ಇದಕ್ಕಾಗಿ ಮೂಲ ಬಿಜೆಪಿಗರು, ವಲಸಿಗರು, ರಾಜ್ಯಸಭಾ ಟಿಕೆಟ್ ಆಕಾಂಕ್ಷಿಗಳಾಗಿದ್ದವರು, ಪದಾಧಿಕಾರಿಗಳು, ಮುಖಂಡರು, ಕಾರ್ಯಕರ್ತರು ಸೇರಿದಂತೆ 123 ಮಂದಿ ಆಕಾಂಕ್ಷಿಗಳಿದ್ದರು. ಎಲ್ಲ ಆಕಾಂಕ್ಷಿಗಳ ಹೆಸರು ಪ್ರಸ್ತಾಪಿಸಿ ಚರ್ಚಿಸಲಾಯಿತು.

ಈ ವೇಳೆ ಬಿಜೆಪಿ ಸರ್ಕಾರ ರಚನೆಗೆ ಕಾರಣರಾದವರಿಗೆ ಆದ್ಯತೆ ನೀಡಬೇಕು ಎಂಬ ಬಗ್ಗೆ ಸಭೆಯಲ್ಲಿ ಪ್ರಮುಖವಾಗಿ ಚರ್ಚೆಯಾಗಿದೆ.

▶ 6ನೇ ಪುಟಕ್ಕೆ

### ದೇವೇಗೌಡರ ನಿರ್ಧಾರಕ್ಕೆ

ಒಂದು ಸ್ಥಾನ ಗೆಲ್ಲುವ ಅವಕಾಶ ಇರುವ ಜೆಡಿಎಸ್ ಸೋಮವಾರ ಶಾಸಕಾಂಗ ಪಕ್ಷದ ಸಭೆ ನಡೆಸಿ ಚರ್ಚಿಸಿ ಅಭ್ಯರ್ಥಿ ಆಯ್ಕೆ ಅಧಿಕಾರ ಪಕ್ಷದ ರಾಷ್ಟ್ರೀಯ ಅಧ್ಯಕ್ಷರಾದ ದೇವೇಗೌಡರಿಗೆ ನೀಡಲಾಗಿದೆ. ಜೂ.17 ರಂದು ಘೋಷಣೆಯಾಗಬಹುದು ಎಂದು ಹೇಳಿದರು. ಒಂದು ಸ್ಥಾನಕ್ಕೆ 30 ರಿಂದ 35 ಆಕಾಂಕ್ಷಿಗಳಿದ್ದಾರೆ, ಅಧಿಕೃತವಾಗಿ 29 ಮಂದಿ ಅರ್ಜಿ ಸಲ್ಲಿಸಿದ್ದಾರೆ. ಶಾಸಕಾಂಗ ಪಕ್ಷದ ಸಭೆಯಲ್ಲಿ ವೈ.ಎಸ್.ವಿ.ದತ್ತಾ, ಕುಪೇಂದ್ರರೆಡ್ಡಿ, ಟಿ.ಎ.ಶರವಣ, ಕೋನರೆಡ್ಡಿ, ಪ್ರಕಾಶ್ ಸೇರಿ ಹಲವರ ಹೆಸರುಗಳು ಪ್ರಸ್ತಾಪವಾದವು ಎಂದು ಹೇಳಲಾಗಿದೆ.

### ಕಾಂಗ್ರೆಸ್‌ನಲ್ಲೂ ಕಗ್ಗಂಟು

ಕಾಂಗ್ರೆಸ್‌ನಲ್ಲಿಯೂ ಎರಡು ಸ್ಥಾನಗಳಿಗಾಗಿ ಎಪ್ಪತ್ತಕ್ಕೂ ಹೆಚ್ಚು ಆಕಾಂಕ್ಷಿಗಳಿದ್ದಾರೆ. ಸದ್ಯ ಆಯ್ಕೆಗೆ ಅಧಿಕೃತವಾಗಿ ಇನ್ನೂ ಸಭೆ ನಡೆದಿಲ್ಲ. ರಾಜ್ಯಸಭೆ ಚುನಾವಣೆಯಂತೆ ಪರಿಷತ್‌ಗೂ ದೂರವಾಣಿ ಮೂಲಕವೇ ರಾಜ್ಯ ನಾಯಕರ ಅಭಿಪ್ರಾಯ ಪಡೆದು ಘೋಷಿಸಬಹುದು. ಡಿ.ಕೆ.ಶಿವಕುಮಾರ್, ಸಿದ್ದರಾಮಯ್ಯ, ಮಲ್ಲಿಕಾರ್ಜುನ ಖರ್ಗೆ ಅವರ ಜತೆ ಚರ್ಚಿಸಿದ ಬಳಿಕ ಆಕಾಂಕ್ಷಿಗಳ ಪಟ್ಟಿಯನ್ನು ಹೈಕಮಾಂಡ್‌ಗೆ ಮಂಗಳವಾರ ಕಳುಹಿಸುವ ಸಾಧ್ಯತೆ ಇದೆ ಎಂದು ಹೇಳಲಾಗಿದೆ.

# ವಿಧಾನ ಪರಿಷತ್‌ಗೆ ಬಿಜೆಪಿ ಆಯ್ಕೆ ಫೈನಲ್?

1ನೇ ಪುಟದಿಂದ ▶ ಮುಖ್ಯವಾಗಿ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿ ಬಿಜೆಪಿ ಸೇರಿದವರ ಪೈಕಿ ಉಪಚುನಾವಣೆಗೆ ಸ್ಪರ್ಧಿಸದ ಆರ್.ಶಂಕರ್ ಹಾಗೂ ಉಪಚುನಾವಣೆಯಲ್ಲಿ ಪರಾಭವಗೊಂಡ ಎಂ.ಟಿ.ಬಿ. ನಾಗರಾಜ್ ಅವರಿಗೆ ಅವಕಾಶ ನೀಡಬೇಕು ಎಂಬ ಬಗ್ಗೆ ಚರ್ಚೆಯಾಯಿತು. ಸಚಿವ ಸ್ಥಾನ ತೊರೆದು ಬಿಜೆಪಿ ಸರ್ಕಾರ ರಚನೆಗೆ ಕಾರಣವಾದವರಿಗೆ ಅವಕಾಶ ಕಲ್ಪಿಸದಿದ್ದರೆ ಪಕ್ಷದ ಬಗ್ಗೆ ಅಪನಂಬಿಕೆ ಮೂಡುವ ಅಪಾಯವಿದೆ. ಹಾಗಾಗಿ ಅವಕಾಶ ಕಲ್ಪಿಸುವುದು ಸೂಕ್ತ ಎಂಬ ಬಗ್ಗೆ ಮಾತುಕತೆ ನಡೆಯಿತು ಎಂದು ಗೊತ್ತಾಗಿದೆ. ಹಾಗೆಯೇ ಸಂಸದ ಉಮೇಶ್ ಜಾಧವ್ ಅವರು ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದಾಗ ಎದುರಾದ ಉಪಚುನಾವಣೆಯಲ್ಲಿ ಅವರ ಪುತ್ರ ಅವಿನಾಶ್ ಜಾಧವ್ ಅವರಿಗೆ ಟಿಕೆಟ್ ನೀಡಿದಾಗ ಕೊಟ್ಟ ಭರವಸೆಯಂತೆ ಮಾಜಿ ಶಾಸಕ ಸುನೀಲ್ ವಲ್ಯಾಪುರೆ ಅವರನ್ನು ಪರಿಷತ್‌ಗೆ ಆಯ್ಕೆ ಮಾಡುವುದು ಸೂಕ್ತ ಎಂಬ ಅಭಿಪ್ರಾಯವೂ ವ್ಯಕ್ತವಾಯಿತು. ಜತೆಗೆ ರಾಜ್ಯಸಭಾ ಚುನಾವಣೆಗೆ ಹೆಸರು ಪ್ರಸ್ತಾಪವಾದರೂ ಅವಕಾಶ ಸಿಗದ ರಾಜ್ಯ ಬಿಜೆಪಿ ಉಪಾಧ್ಯಕ್ಷ ನಿರ್ಮಲ್ ಕುಮಾರ್ ಸುರಾನ ಅವರನ್ನೂ ಮೇಲ್ಮನೆಗೆ ಕಳುಹಿಸುವ ಬಗ್ಗೆ ಚರ್ಚೆ ನಡೆಯಿತು. ಹಾಗಾಗಿ ಈ ನಾಲ್ಕೂ ಮಂದಿಯ ಹೆಸರನ್ನು ಪ್ರಧಾನ ಸಂಭಾವ್ಯ ಅಭ್ಯರ್ಥಿಗಳಾಗಿ ಶಿಫಾರಸು ಮಾಡಲು ನಿರ್ಧರಿಸಲಾಯಿತು. ಅಂದರೆ ವಲಸಿಗ ಹಾಗೂ ಮೂಲ ಬಿಜೆಪಿಯ ತಲಾ ಇಬ್ಬರಿಗೆ ಅವಕಾಶ ನೀಡುವ ಲೆಕ್ಕಾಚಾರ ನಡೆಸಲಾಯಿತು ಎಂದು ಹೇಳಲಾಗಿದೆ. ಜತೆಗೆ ಬಿಜೆಪಿ ಸರ್ಕಾರ ರಚನೆಗೆ ತೆರೆಮರೆಯಲ್ಲೇ ನೆರವಾದ ಸಿ.ಪಿ.ಯೋಗೇಶ್ವರ್, ಕಾಂಗ್ರೆಸ್ ತೊರೆದ ಮುನಿರತ್ನ, ಸಂಘಟನೆ ಹಿನ್ನೆಲೆಯ ಮಹೇಶ್ ಟೆಂಗಿನಕಾಯಿ, ಭಾರತಿ ಶೆಟ್ಟಿ, ಪ್ರತಾಪ ಸಿಂಹ ನಾಯಕ್, ಗೋಪಿನಾಥ ರೆಡ್ಡಿ ಅವರ ಹೆಸರನ್ನೂ ಸಂಭಾವ್ಯರ ಪಟ್ಟಿಯಲ್ಲಿ ಸೇರಿಸಲು ನಿರ್ಧರಿಸಲಾಯಿತು ಎಂದು ಹೇಳಿವೆ.

**ವರಿಷ್ಠರ ನಿರ್ಧಾರ ಅಂತಿಮ:** ರಾಜ್ಯ ಬಿಜೆಪಿ ಕೋರ್ ಕಮಿಟಿಯಲ್ಲಿ 10 ಸಂಭಾವ್ಯ ಅಭ್ಯರ್ಥಿಗಳ ಹೆಸರನ್ನು ಕೇಂದ್ರ ಚುನಾವಣಾ ಸಮಿತಿಗೆ ಶಿಫಾರಸು ಮಾಡಲು ನಿರ್ಧಾರವಾಗಿದೆ. ಆದರೆ ಇದಕ್ಕೆ ವರಿಷ್ಠರ ಒಪ್ಪಿಗೆ ಪಡೆಯುವುದು ಮುಖ್ಯ. ಇತ್ತೀಚೆಗೆ ನಡೆದ ರಾಜ್ಯಸಭೆ ಚುನಾವಣೆ ಸಂದರ್ಭದಲ್ಲಿ ವರಿಷ್ಠರು ಅಚ್ಚರಿ ಎಂಬಂತೆ ಸಾಮಾನ್ಯ ಕಾರ್ಯಕರ್ತರನ್ನು ಅಭ್ಯರ್ಥಿಗಳನ್ನಾಗಿ ಆಯ್ಕೆ ಮಾಡಿದ್ದರು. ಹಾಗಾಗಿ ವರಿಷ್ಠರು ಯಾವ ನಿರ್ಧಾರ ಕೈಗೊಳ್ಳಲಿದ್ದಾರೆ ಎಂಬುದನ್ನು ಕಾದು ನೋಡಬೇಕಿದೆ.